# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 136 | Pages. 2 | Date: 03-05-2026, SUNDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 136 – ಪುಟಗಳು : 2 | 03-05-2026 | ಭಾನುವಾರ | Ph: 8762954248 | ದರ : ₹1


# ಬಂಡವಾಳಶಾಹಿಗಳ ಕಪಿಮುಷ್ಟಿಯಲ್ಲಿ ಮಾಧ್ಯಮ

## ನಿಷ್ಠುರ ವರದಿಗಾರಿಕೆ ಪ್ರಮಾಣ ಕಡಿಮೆ | ಮಾಜಿ ಶಾಸಕ ವೈ.ಎಸ್.ವಿ.ದತ್ತ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಾಧ್ಯಮ ಕ್ಷೇತ್ರವು ಬಂಡವಾಳಶಾಹಿಗಳ ಹಿಡಿತಕ್ಕೆ ಸಿಲುಕಿ ಹಣ ಮಾಡುವ ಉದ್ಯಮವಾಗಿ ಮಾರ್ಪಟ್ಟಿದ್ದು ಅದರ ಘನತೆಯನ್ನು ಉಳಿಸಿಕೊಳ್ಳಬೇಕಾದ ಸಂದಿಗ್ಧ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಮಾಜಿ ಶಾಸಕ, ಚಿಂತಕ ವೈ.ಎಸ್.ವಿ.ದತ್ತ ಹೇಳಿದರು.

ಜಿಲ್ಲಾ ಪತ್ರಕರ್ತರ ಸಂಘದ ಸಾಂಸ್ಕೃತಿಕ ಸಮಿತಿಯ ಸ್ಟಡೀ ವಿತ್ ಸೊಸೈಟಿ ವತಿಯಿಂದ ಶನಿವಾರ ಹಮ್ಮಿಕೊಂಡಿದ್ದ ರಾಜಕೀಯ ನೋಟ ಮತ್ತು ಪತ್ರಿಕಾರಂಗ ವಿಷಯ ಕುರಿತು ಉಪನ್ಯಾಸ ನೀಡಿದರು.

ನಾವು ರಾಜಕೀಯ ಆರಂಭಿಸಿದ ದಿನಗಳಲ್ಲಿನ ಪತ್ರಿಕಾ ಕ್ಷೇತ್ರಕ್ಕೂ ಈಗಿನ ಬೆಳವಣಿಗೆಗಳಿಗೂ ಸಾಕಷ್ಟು ವ್ಯತ್ಯಾಸವಿದೆ. ಯಾವುದಾದರು ಪತ್ರಿಕೆಯಲ್ಲಿ ತೀಕ್ಷ್ಣ ಸಂಪಾದಕೀಯ ಪ್ರಕಟವಾದರೆ ರಾಜಕಾರಣಿಗಳು ನಡುಗುತ್ತಿದ್ದರು. ಆದರೆ ಈಗ ಅಂತಹ ಬರಗಳು ಸಿಗುತ್ತಿಲ್ಲ. ಬಂಡವಾಳಶಾಹಿಗಳ ಸಿಲುಕಿ ಮಾಧ್ಯಮ ತನ್ನ ಅಸ್ತಿತ್ವವನ್ನೇ ಕಳೆದುಕೊಳ್ಳುತ್ತಿದೆ ಎಂದರು.

ಇಂದಿರಾ ಗಾಂಧಿ ಅವರು ತುರ್ತು ಪರಿಸ್ಥಿತಿ ಹೇರಿ ಮಾಧ್ಯಮ ಸ್ವಾತಂತ್ರ್ಯ ದಮನ ಮಾಡಿದರು. ವಿಪಕ್ಷ ನಾಯಕರನ್ನು ಜೈಲಿಗೆ ತಳ್ಳಿದರು. ಪ್ರಜಾಪ್ರಭುತ್ವದ ಉಸಿರು ನಿಲ್ಲಿಸುವಂತಹ ವಾತಾವರಣದಲ್ಲಿ ಜಯಪ್ರಕಾಶ್ ನಾರಾಯಣ ಅವರ ನೇತೃತ್ವದಲ್ಲಿ ಹೋರಾಟ ನಡೆಸಿ ನಾವು ಸಾರ್ವಜನಿಕ ಜೀವನಕ್ಕೆ ಪ್ರವೇಶಿಸಿದೆವು ಎಂದು ನೆನಪಿಸಿಕೊಂಡರು.

ಇದೇ ವೇಳೆ ಪತ್ರಿಕೋದ್ಯಮ ಬದಲಿಗೆ ಪತ್ರಿಕಾರಂಗ ಎಂದು ಕರೆಯುವುದು ಉತ್ತಮ. ಪತ್ರಿಕಾರಂಗವನ್ನು ಪ್ರಜಾಪ್ರಭುತ್ವದ ನಾಲ್ಕನೇ ಅಂಗ ಮತ್ತು ಕಾವಲು ನಾಯಿ ಎಂದು ಕರೆಯುತ್ತಾರೆ. ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗಕ್ಕಿಂತಲೂ ಪತ್ರಿಕಾರಂಗಕ್ಕೆ ಹೆಚ್ಚಿನ ಹೊಣೆಗಾರಿಕೆ ಇದೆ. ಪ್ರಜಾಪ್ರಭುತ್ವದ ಸಂರಕ್ಷಣೆ, ಜನಪರ ಜಾಗೃತಿ ಜೊತೆಗೆ ರಾಜಕಾರಣಿಗಳ ನಡವಳಿಕೆ ಬಿಚ್ಚಿಡುವ ಕೆಲಸವನ್ನು ಪತ್ರಕರ್ತರು ಮಾಡಬೇಕು. ಪ್ರಜಾಪ್ರಭುತ್ವ ರಕ್ಷಿಸುವಲ್ಲಿ ಮಾಧ್ಯಮಗಳ ಪಾತ್ರ ಅತ್ಯಂತ ಮಹತ್ವದ್ದು, ಮಾಧ್ಯಮ ಪ್ರಜಾಪ್ರಭುತ್ವದ ಕಣ್ಣು, ಕಿವಿ, ಬಾಯಿಯಾಗಿ ಕೆಲಸ ಮಾಡಬೇಕು ಎಂದು ಒತ್ತಿ ಹೇಳಿದರು.

ಹಿಂದೆ ಪತ್ರಕರ್ತರೆಂದರೆ ಆಡಳಿತ ನಡೆಸುವವರಿಗೆ ನೈತಿಕ ಭಯ ಇತ್ತು. ಅಂಜಿಕೆ, ಅಳುಕು ಇತ್ತು. ಆತ್ಮಾವಲೋಕನ ಮಾಡಿಕೊಳ್ಳುತ್ತಿದ್ದರು. ಇದಕ್ಕೆ ಜ್ವಲಂತ ಉದಾಹರಣೆ ಡಿ.ವಿ.ಗುಂಡಪ್ಪ. ದಿವಾನರೂ ಅವರನ್ನು ಗೌರವಿಸುತ್ತಿದ್ದರು ಎಂದು ಸ್ಮರಿಸಿದರು.

ಕೆಂಗಲ್ ಹನುಮಂತಯ್ಯ ವಿಧಾನಸೌಧ ಕಟ್ಟಿಸಿದರು. ಆಗ ಕಿಡಿ ಪತ್ರಿಕೆಯ ಶೇಷಪ್ಪ ಎಂಬುವರು ಕಾಮಗಾರಿಯಲ್ಲಿ ಭ್ರಷ್ಟಾಚಾರ ಕುರಿತು ನಿಷ್ಟುರ ವರದಿ ಪ್ರಕಟಿಸುತ್ತಿದ್ದರು. ಅವು ಮುಖ್ಯಮಂತ್ರಿಗಳಿಗೂ ಇರುಸು-ಮುರುಸು ಉಂಟು ಮಾಡುತ್ತಿದ್ದವು ಎಂದು ನೆನಪಿಸಿದರು.

ಇಂದು ಪತ್ರಿಕಾ ಸ್ವಾತಂತ್ರ್ಯಕ್ಕೆ ಧಕ್ಕೆಯಾಗಿದೆ. ನಿರ್ಭಯವಾಗಿ ಅಭಿಪ್ರಾಯ




> ಪತ್ರಕರ್ತರು ಇವತ್ತಿನ ಆಗು ಹೋಗು ಮಾತ್ರವಲ್ಲ, ಹಿಂದಿನದನ್ನೂ ಓದಿ ತಿಳಿಯಬೇಕು. ನೀರಾವರಿ, ರಾಜಕೀಯ, ಅಭಿವೃದ್ಧಿ ಬಗ್ಗೆ ಹಳೆಯದನ್ನು ತಿರುವಿ ಹಾಕುವುದು ಉಪಯೋಗಕಾರಿ. ಈಗೀಗ ಜಾತಿ, ಹಣ ಸೇರಿ ಇಡೀ ವ್ಯವಸ್ಥೆ ಗೋಜಲಾಗಿದೆ. ರಾಜಕಾರಣ ಮತ್ತು ಮಾಧ್ಯಮ ಕ್ಷೇತ್ರ ಎರಡೂ ನೈತಿಕತೆ ಕಳೆದು ಕೊಳ್ಳುತ್ತಿವೆ. ಜನಪರ ಚಳವಳಿ ಮಾಡುವುದು ಕಷ್ಟವಾಗಿದೆ. ಆದರೂ ನಿರಾಶೆಯಲ್ಲೂ ಕ್ರಿಯಾಶೀಲರಾಗಿ ಪರಿಹಾರ ಹುಡುಕುವ ಕೆಲಸ ತುರ್ತಾಗಿ ಆಗಬೇಕು.
>
> **- ವೈ.ಎಸ್.ವಿ.ದತ್ತ, ಮಾಜಿ ಶಾಸಕ**

ಮಂಡಿಸಲು ಆಗುತ್ತಿಲ್ಲ. ಪತ್ರಕರ್ತರ ಸ್ವಾತಂತ್ರ್ಯ ಹರಣ ಆಗುತ್ತಿದೆ. ಪತ್ರಿಕೋದ್ಯಮ ಬಂಧನದಲ್ಲಿದೆ ಎಂದು ವಿಷಾದಿಸಿದರು.

ಹಿಂದೆ ಸಂಪಾದಕೀಯ ನೋಡಿ ಜನ ಹೆದರುತ್ತಿದ್ದರು. ಅದು ಜನರ ಧ್ವನಿಯಾಗಿತ್ತು. ಆದರೀಗ ಚೂಪು, ಹರಿತ ಇಲ್ಲವಾಗಿದೆ. ಆಡಳಿತಗಾರರು ಪತ್ರಕರ್ತರನ್ನು ಕಾಣುವ ರೀತಿ ಬದಲಾಗಿದೆ. ವಡ್ಡರ್ಸೆ ರಘುರಾಮ ಶೆಟ್ಟಿ ಅವರಂತಹ ರಾಜಕೀಯ ವಿಶ್ಲೇಷಣೆ ಮಾಡುವ ಪತ್ರಕರ್ತರು ಈಗ ಸಿಗುತ್ತಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

### ಸಾಮಾಜಿಕ ಮೌಲ್ಯಗಳ ಅಧಪತನ

ಹಿರಿಯ ಪತ್ರಕರ್ತ ಆರ್.ಪಿ.ವೆಂಕಟೇಶ್ ಮಾತನಾಡಿ, ಇಂದು ಆದರ್ಶ ಇಲ್ಲದ ವ್ಯವಸ್ಥೆ, ವಿಭಜನೆಯ ರಾಜಕಾರಣ ಇಂದಿನ ದೊಡ್ಡ ಸವಾಲಾಗಿದೆ. ಜಾಗತೀಕರಣದ ಬೆಳವಣಿಗೆಯಿಂದ ಎಲ್ಲದರ ಮೇಲೂ ಒತ್ತಡ ಹೆಚ್ಚಾಗಿದೆ. ಎಐ ಜೊತೆಗಿನ ವೇಗದ ವ್ಯವಸ್ಥೆಯಲ್ಲಿ ಮೌಲ್ಯಗಳು ಕಳೆದು ಹೋಗುತ್ತಿವೆ ಎಂದು ವಿಶ್ಲೇಷಿಸಿದರು.

ಚಳವಳಿ ಒಡೆದರೂ ಹೊಸದೇನೂ ಕಟ್ಟಲಾಗಲಿಲ್ಲ. ನಾವು ಜಾಗತಿಕ ದಾರಿ ಹಿಡಿಯಬೇಕಾ ಅಥವಾ ಪರ್ಯಾಯ ದಾರಿ ಕಂಡುಕೊಳ್ಳಬೇಕಾ, ಸಾಮಾಜಿಕ ವ್ಯವಸ್ಥೆ ಮೇಲೆ ಆಗುತ್ತಿರುವ ಪರಿಣಾಮಗಳಿಗೆ ಪರಿಹಾರ ಹುಡುಕುವ ಪ್ರಯತ್ನ ಆಗಬೇಕು ಎಂದು ಪ್ರತಿಪಾದಿಸಿದರು.

### ಭ್ರಷ್ಟಾಚಾರಕ್ಕೆ ರಾಜಕಾರಣಿಗಳೇ ಕಾರಣ

ಮಹಾನಗರ ಪಾಲಿಕೆ ಮಾಜಿ ಸದಸ್ಯ ಎಸ್.ಹೆಚ್.ವಾಸುದೇವ್ ಮಾತನಾಡಿ, ಇಂದಿನ ಭ್ರಷ್ಟಾಚಾರಕ್ಕೆ ಜನರೂ ಕಾರಣ, ಭಾಗ್ಯಗಳು ಅಭಿವೃದ್ಧಿಗೆ ಮಾರಕ, ಇದನ್ನು ಎತ್ತಿ ಹಿಡಿಯುವ ಕೆಲಸವನ್ನು ಪತ್ರಿಕೋದ್ಯಮ ಮಾಡಬೇಕೆಂದರು.

ಜನರು ರಾಜಕಾರಣಿಗಳ ಆಮಿಷಕ್ಕೆ ಒಳಗಾಗಿ ಅವರನ್ನು ಆಯ್ಕೆ ಮಾಡುವುದರಿಂದ ಅವರು ಭ್ರಷ್ಟರಾಗುತ್ತಾರೆ. ದೇಶ ಅವನತಿಯತ್ತ ಸಾಗುತ್ತಿದೆ. ತಪ್ಪು ಮಾಡುವ ಸರ್ಕಾರಗಳನ್ನು ಖಂಡಿಸುವುದು ಪತ್ರಿಕಾರಂಗದ ಕರ್ತವ್ಯ




ಎಂದು ಪ್ರತಿಪಾದಿಸಿದರು. ಹಾಗೆಯೇ ದುಡಿಯುವ ಮಾರ್ಗ ತೋರಿಸಬೇಕು. ಮೊದಲು ಭ್ರಷ್ಟಾಚಾರ ಕೊನೆಗಾಣಬೇಕು.

ಹೈನೋದ್ಯಮ ಮಾಡುವ ಇತ್ಯಾದಿ ರೈತರಿಗೆ ಪ್ರೋತ್ಸಾಹಧನ ಸಿಗಬೇಕು. ಯುಜಿಡಿ ಸೇರಿ ಸ್ಥಳೀಯವಾಗಿ ಅಭಿವೃದ್ಧಿ ಆಗುತ್ತಿಲ್ಲ. ಇದಕ್ಕೆ ಸರ್ಕಾರ ಹಣ ಕೊಡದಿರುವುದೂ ಕಾರಣವಾಗಿದೆ.

ಇದನ್ನು ಪತ್ರಿಕಾರಂಗ ಬಯಲಿಗೆಳೆಯಬೇಕು. ಸರ್ಕಾರದ ವೈಫಲ್ಯಗಳನ್ನು ಬಯಲಿಗೆಳೆಯಬೇಕು ಎಂದು ಕರೆ ನೀಡಿದರು.

ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಮಾಜಿ ಅಧ್ಯಕ್ಷ ರವಿ ನಾಕಲಗೂಡು, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಕೆ.ಪಿ.ಎಸ್.ಪ್ರಮೋದ್, ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್, ಸಾಂಸ್ಕೃತಿಯ ಸಮಿತಿ ಸಂಚಾಲಕ ಚಲಂ ಹಾಡ್ಲಹಳ್ಳಿ ಮೊದಲಾದವರಿದ್ದರು. ಕಾರ್ಯದರ್ಶಿ ಕೆ.ಎಂ.ಹರೀಶ್ ನಿರೂಪಿಸಿದರು. ಮಲ್ಲಿಕಾರ್ಜುನ ಕೊಚ್ಚರಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಹೆಚ್.ವಿ.ಸುರೇಶ್ ಕುಮಾರ್ ವಂದಿಸಿದರು. ಸರ್ಕಾರಿ ಮಹಿಳಾ ಪ್ರಥಮ ಕಾಲೇಜಿನ ವಿದ್ಯಾರ್ಥಿಗಳು ಸಂವಾದ ನಡೆಸಿದರು.

# ಮಹಿಳಾ ಮೀಸಲಾತಿಗೆ ವಿರೋಧ: ಬಿಜೆಪಿ ಪ್ರತಿಭಟನೆ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮಹಿಳಾ ಮೀಸಲಾತಿ ಮಸೂದೆ ವಿರೋಧಿಸಿದ ಕಾಂಗ್ರೆಸ್ ಮತ್ತು ಮಿತ್ರ ಪಕ್ಷಗಳ ವಿರುದ್ಧ ಪಟ್ಟಣದ ಕೃಷ್ಣರಾಜೇಂದ್ರ ವೃತ್ತದಲ್ಲಿ ಶನಿವಾರ ಶ್ರವಣಬೆಳಗೊಳ ಮಂಡಲ ಬಿಜೆಪಿ ಮಹಿಳಾ ಘಟಕದ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ತೂಬಿನಕೆರೆ ಶ್ರುತಿ ಗಿರೀಶ್ ಮಾತನಾಡಿ, 30 ವರ್ಷಗಳಿಂದ ಮಹಿಳೆಯರ ಮೀಸಲಾತಿಗಾಗಿ ಹೋರಾಟ ಮಾಡಿಕೊಂಡು ಬಂದಿದ್ದ ಮಹಿಳಾಪರ ಹೋರಾಟಗಾರರ ಆಶಯದಂತೆ ಮಹಿಳಾ ಮೀಸಲಾತಿಯನ್ನು ಪ್ರಧಾನಿ ನರೇಂದ್ರ ಮೋದಿ ಸಂಸತ್ ಭವನದಲ್ಲಿ ಮಂಡಿಸಿದಾಗ ಮಹಿಳಾ ಮೀಸಲಾತಿ ಹೋರಾಟಕ್ಕೆ ನ್ಯಾಯ ಸಿಗುತ್ತದೆ ಎಂದು ನಂಬಿಕೆ ಇಟ್ಟುಕೊಂಡಿದ್ದವು. ಮಹಿಳೆಯರ ಪರವಾಗಿ ಶೇ.33ರಷ್ಟು ಮೀಸಲಾತಿ ಮಂಡನೆ ಆದಾಗ ಕಾಂಗ್ರೆಸ್ ನೇತೃತ್ವದಲ್ಲಿ ಕಾಂಗ್ರೆಸ್ ಮಹಿಳಾ ವಿರೋಧಿ ಎಂಬುದನ್ನು ಸಾಬೀತು ಮಾಡಿದೆ. ಕಳೆದ 50 ವರ್ಷಗಳ ಕಾಲ ದೆಹಲಿಯಲ್ಲಿ ಆಡಳಿತ ನಡೆಸಿಕೊಂಡು ಬಂದಿರುವ ಕಾಂಗ್ರೆಸ್ ಸರ್ಕಾರಕ್ಕೆ ಮಹಿಳೆಯರ ಪರ ನ್ಯಾಯ ಕೊಡಿಸುವ ಅವಕಾಶವಿದ್ದರೂ ಉದಾಸೀನ ಮಾಡಿಕೊಂಡು ಮಹಿಳಾ ವಿರೋಧಿಯಾಗಿ ನಡೆದುಕೊಳ್ಳುತ್ತಿದೆ ಎಂದರು.

ಪ್ರಧಾನಿ ನರೇಂದ್ರ ಮೋದಿ ಅವರು ಶೇ.33ರಷ್ಟು ಮಹಿಳಾ ಮೀಸಲಾತಿಯನ್ನು ನೀಡಿ ಕೇಂದ್ರ, ಹಾಗೂ ರಾಜ್ಯ ಸರ್ಕಾರಗಳ ಆಡಳಿತದಲ್ಲಿ ಮಹಿಳೆಯರು ಪಾಲುದಾರರಾಗಬೇಕು ಎಂಬ ಆಸೆಯೊಂದಿಗೆ ಈ ಮಸೂದೆಯನ್ನು ಮಂಡಿಸಿದರು ಆದರೆ ಕಾಂಗ್ರೆಸ್ ನೇತೃತ್ವದ ಮೈತ್ರಿಕೂಟವು ಈ ಮಸೂದೆಗೆ ವಿರೋಧ ಮಾಡುವ ಮೂಲಕ ಮಹಿಳಾ ವಿರೋಧಿಗಳಾಗಿದ್ದಾರೆ. ನೀವು ಸೋಲಿಸಿದ್ದು ನರೇಂದ್ರ ಮೋದಿಯವರ ಮಸೂದೆಯನ್ನಲ್ಲ, ಈ ದೇಶದ ಹೆಣ್ಣು ಮಕ್ಕಳ ಸ್ವಾಭಿಮಾನದ ಹಕ್ಕನ್ನ ಸೋಲಿಸಿದ್ದೀರಾ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಶ್ರವಣಬೆಳಗೊಳ ಮಂಡಲದ ಬಿಜೆಪಿ ಅಧ್ಯಕ್ಷೆ ಪರಮು ಗಂಗಾಧರ್, ಪ್ರಧಾನ ಕಾರ್ಯದರ್ಶಿ ಗನ್ನಿ ವಿಶ್ವನಾಥ್, ಅರ್ಪಿತಾ ಪಟೇಲ್, ಕಲಾವತಿ, ಭವಾನಿ, ಶೋಭ, ಅಶೋಕ್ ಶೆಟ್ಟಿಹಳ್ಳಿ, ಸತೀಶ್ ಗೌಡಗೆರೆ, ವೆಂಕಟೇಶಚಾರ್, ಹೊನ್ನಶೆಟ್ಟಿಹಳ್ಳಿ ಶ್ರೀಹರಿಗೌಡ, ಮಂಜುನಾಥ್ ನಿಂಬೆಹಳ್ಳಿ, ನಂಜುಂಡ ಮೈಮ್, ಎ.ಆರ್.ನಾಗರಾಜ್ ಇತರರಿದ್ದರು.

# ಎಂಟಿಇಎಸ್ ಅಧ್ಯಕ್ಷರಾಗಿ ಗುರುದೇವ್ ಅಧಿಕಾರ ಸ್ವೀಕಾರ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಮಲೆನಾಡು ತಾಂತ್ರಿಕ ಶಿಕ್ಷಣ ಸಮಿತಿಯ ಆಡಳಿತ ಮಂಡಳಿಯಲ್ಲಿ ಅಧಿಕಾರಕ್ಕಾಗಿ ನಡೆಯುತ್ತಿದ್ದ ಜಟಾಪಟಿಗೆ ಅಂತಿಮವಾಗಿ ಹೈಕೋರ್ಟ್ ತೆರೆ ಎಳೆದಿದ್ದು ನೂತನ ಆಡಳಿತ ಮಂಡಳಿ ಶನಿವಾರ ಅಧಿಕಾರ ಸ್ವೀಕರಿಸಿತು.

ನಗರದ ಎಂ.ಜಿ. ರಸ್ತೆಯಲ್ಲಿರುವ ಸಮಿತಿಯ ಆಡಳಿತ ಕಚೇರಿಗೆ ಮಾಜಿ ಅಧ್ಯಕ್ಷರು ಹಾಗೂ ಹಿರಿಯ ನಿರ್ದೇಶಕ ಅಶೋಕ್ ಹಾರನಹಳ್ಳಿ ಅವರ ನೇತೃತ್ವದಲ್ಲಿ 14 ಮಂದಿ ನಿರ್ದೇಶಕರು ಆಗಮಿಸಿ, ನಿಯಮಾನುಸಾರ ಅಧಿಕಾರ ಸ್ವೀಕರಿಸಿದರು.

ಬಿ.ಆರ್. ಗುರುದೇವ್ ಅವರು ನೂತನ ಅಧ್ಯಕ್ಷರಾಗಿ, ಜಿ.ಟಿ. ಕುಮಾರ್ ಅವರು ಕಾರ್ಯದರ್ಶಿಯಾಗಿ ಮತ್ತು ಎಸ್.ಜೆ. ಶ್ರೀಧರ್ ಖಜಾಂಚಿಯಾಗಿ ಅಧಿಕಾರ ಸ್ವೀಕರಿಸಿದರು.

### ವೆಬ್‌ಸೈಟ್‌ನಲ್ಲಿ ಆದೇಶದ ಪ್ರತಿ

ಎಂಟಿಇಎಸ್ ಆಡಳಿತ ಮಂಡಳಿ ಅಧಿಕಾರ ವಿವಾದಕ್ಕೆ ಸಂಬಂಧಿಸಿದಂತೆ ರಾಜ್ಯ ಉಚ್ಚ ನ್ಯಾಯಾಲಯ ಆದೇಶ ನೀಡಿದ್ದು, ಇದರ ಆದೇಶದ ಪ್ರತಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಿದೆ. ಅದರ ಅನ್ವಯ ಇಂದು ನೂತನ ಆಡಳಿತ ಮಂಡಳಿಯವರು ಅಧಿಕಾರ ಸ್ವೀಕರಿಸಿದ್ದೇವೆ. ಅಧಿಕೃತವಾಗಿ ಸೋಮವಾರ ಇದರ ಪ್ರತಿ ಲಭ್ಯವಾಗಲಿದೆ. ಇದರಲ್ಲಿ ಯಾವುದೇ ರೀತಿ ಗೊಂದಲವಿಲ್ಲ. ಕೋರ್ಟ್ ಆದೇಶದಂತೆ ನಾವು ಅಧಿಕಾರ ಸ್ವೀಕರಿಸಿದ್ದೇವೆ ಎಂದು ಸಂಸ್ಥೆಯ ನೂತನ ಅಧ್ಯಕ್ಷ ಬಿ.ಆರ್ ಗುರುದೇವ್ ತಿಳಿಸಿದರು.

ಅಧಿಕಾರ ಸ್ವೀಕಾರ ಬಳಿಕ ಮಾತನಾಡಿದ ಅಧ್ಯಕ್ಷ ಬಿ.ಆರ್.ಗುರುದೇವ್, ದೀರ್ಘಕಾಲ ನಡೆದ ಕಾನೂನು ಹೋರಾಟಕ್ಕೆ ನ್ಯಾಯ ದೊರೆತಿದೆ.ಎಲ್ಲಾ ನಿರ್ದೇಶಕರು ಹಾಗೂ ಸದಸ್ಯರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಂಸ್ಥೆಯ ಅಭಿವೃದ್ಧಿಗೆ ಒತ್ತು ನೀಡುತ್ತೇವೆ ಎಂದು ಹೇಳಿದರು.

ಹೈಕೋರ್ಟ್ ಆದೇಶದ ಪ್ರತಿ ಆಧಾರವಾಗಿ ಅಧಿಕಾರ ಸ್ವೀಕರಿಸಿದ್ದೇವೆ. ಕಚೇರಿಯ ದಾಖಲೆಗಳನ್ನು ಪರಿಶೀಲನೆ ಮಾಡಲಾಗಿದ್ದು, ಕೆಲವು ಪ್ರಮುಖ ದಾಖಲೆಗಳು, ವಿಶೇಷವಾಗಿ ನಡಾವಳಿ ಪುಸ್ತಕ ಹಾಗೂ ಸದಸ್ಯರ ನೋಂದಣಿ ಪುಸ್ತಕ ಲಭ್ಯವಾಗಿಲ್ಲ. ಉಳಿದ ದಾಖಲೆಗಳನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುತ್ತದೆ ಎಂದು ತಿಳಿಸಿದರು.

ಮಾಜಿ ಅಧ್ಯಕ್ಷ ಅಶೋಕ್ ಹಾರನಹಳ್ಳಿ, ಕೆ. ಪ್ರಭಾಕರ್, ಡಾ.ಅರವಿಂದ್, ಶಿವಣ್ಣ, ಗುರಪ್ಪ, ಜಿ.ಆರ್.ಶ್ರೀನಿವಾಸ್, ಶ್ರೀಧರ್, ಎಚ್.ಜಿ.ಸುರೇಶ್, ಬೂವನಹಳ್ಳಿ ಶ್ರೀನಿವಾಸ್ ಸೇರಿ ಹಲವು ನಿರ್ದೇಶಕರಿದ್ದರು.

ನೂತನವಾಗಿ ಅಧಿಕಾರ ಸ್ವೀಕರಿಸಿದ ಪದಾಧಿಕಾರಿಗಳನ್ನು ಮಾಜಿ ಮಹಾಪೌರ ಗಿರೀಶ್ ಚನ್ನವೀರಪ್ಪ ಮತ್ತು ಸಂಸ್ಥೆಯ ಮಾಜಿ ಕಾರ್ಯದರ್ಶಿ ಬಿ.ಕೆ ಮಂಜುನಾಥ್ ಸೇರಿ ಹಲವರು ಅಭಿನಂದಿಸಿದರು.

# ಕಾರ್ಮಿಕರ ಅವಿರತ ಶ್ರಮದಿಂದಲೇ ರಾಷ್ಟ್ರ ಅಭಿವೃದ್ಧಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ದೇಶದ ಆರ್ಥಿಕ ಪ್ರಗತಿಗೆ ಕಾರ್ಮಿಕರೇ ಬೆನ್ನೆಲುಬು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ಪುರಭವನದಲ್ಲಿ ಟಿಂಬರ್ ಕಾರ್ಮಿಕರ ಸಂಘ, ಅಸಂಘಟಿತ ಕಾರ್ಮಿಕರು ಹಾಗೂ ತಾಲೂಕಿನ ವಿವಿಧ ಕಾರ್ಮಿಕ ಸಂಘಟನೆಗಳ ಸಹಯೋಗದಲ್ಲಿ ಏರ್ಪಡಿಸಿದ್ದ ಕಾರ್ಮಿಕರ ದಿನಾಚರಣೆಯಲ್ಲಿ ಮಾತನಾಡಿದ ಅವರು, ದಿನೇದಿನೇ ಪ್ರತಿಯೊಂದು ಹಂತದಲ್ಲೂ ಕಾರ್ಮಿಕರ ಸಮಸ್ಯೆಗಳು ಹೆಚ್ಚುತ್ತಿವೆ. ಆದರೆ, ಸರ್ಕಾರಗಳು ಅವುಗಳ ಪರಿಹಾರಕ್ಕೆ ತಕ್ಕ ಮಟ್ಟಿಗೆ ಗಮನ ಹರಿಸದಿರುವುದು ಖಂಡನೀಯ ಎಂದರು.

ಕಾರ್ಮಿಕರ ಬೆವರ ಹನಿಗೆ ತಕ್ಕ ಪ್ರತಿಫಲ ದೊರೆತಾಗ ಮಾತ್ರ ಅವರು ನೆಮ್ಮದಿಯಿಂದ ಬದುಕಲು ಸಾಧ್ಯ. ಕಾರ್ಮಿಕರೇ ದೇಶದ ನಿಜವಾದ ಭವಿಷ್ಯ ಎಂಬುದನ್ನು ಸರ್ಕಾರಗಳು ಮರೆಯಬಾರದು ಎಂದು ಕಿವಿಮಾತು ಹೇಳಿದರು.



ಸ್ವಾತಂತ್ರ್ಯ ಪೂರ್ವದಲ್ಲಿ ಕಾರ್ಮಿಕರಿಗೆ ಯಾವುದೇ ಸೌಲಭ್ಯಗಳಿರಲಿಲ್ಲ. ದಿನಕ್ಕೆ 18 ಗಂಟೆಗಳವರೆಗೆ ದುಡಿಸಿಕೊಳ್ಳಲಾಗುತ್ತಿತ್ತು. ಆದರೆ, ಸ್ವಾತಂತ್ರ್ಯ ನಂತರ ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರು ಕಾರ್ಮಿಕರ ಹಿತಕ್ಕಾಗಿ ಹಲವು ಯೋಜನೆಗಳನ್ನು ಜಾರಿಗೆ ತಂದು, ದಿನಕ್ಕೆ 8 ಗಂಟೆಗಳ ಕೆಲಸದ ವ್ಯವಸ್ಥೆ ಜಾರಿಗೆ ತಂದರು. ಕಾರ್ಮಿಕರ ಜೀವನಮಟ್ಟ ಸುಧಾರಿಸಲು ಮಹತ್ತರ ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ಕಾರ್ಮಿಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ಒದಗಿಸುವ ಸಂಕಲ್ಪ ಮಾಡಬೇಕು. ದೇಶದ ಪ್ರತಿಯೊಂದು ನಿರ್ಮಾಣ ಮತ್ತು ಅಭಿವೃದ್ಧಿ ಕಾರ್ಯದ ಹಿಂದೆ ಕಾರ್ಮಿಕರ ಶ್ರಮ ಅಡಕವಾಗಿದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಕಾರ್ಮಿಕರ ಕಲ್ಯಾಣಕ್ಕಾಗಿ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದು, ಅವುಗಳ ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ಕಾರ್ಮಿಕರಲ್ಲದವರು ಕಾರ್ಮಿಕ ಕಾರ್ಡ್ ಪಡೆದು ಸೌಲಭ್ಯ ಪಡೆಯುತ್ತಿರುವ ಬಗ್ಗೆ ಜಾಗೃತಿ ವಹಿಸಬೇಕು ಎಂದು ಸೂಚಿಸಿದರು.

ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ತಾಲ್ಲೂಕು ಅಧ್ಯಕ್ಷ ಮುರಳಿ ಮೋಹನ್ ಮಾತನಾಡಿ, ದೇಶದ ನಿಜವಾದ ಶಕ್ತಿ ಕಾರ್ಮಿಕರೇ ಆಗಿದ್ದಾರೆ. ಕಾರ್ಮಿಕರಿಲ್ಲದೆ ಯಾವುದೇ ಅಭಿವೃದ್ಧಿ ಸಾಧ್ಯವಿಲ್ಲ. ಕಾಂಗ್ರೆಸ್ ಸರ್ಕಾರ ಕಾರ್ಮಿಕಪರ ನೀತಿಗಳನ್ನು ಜಾರಿಗೆ ತಂದಿದೆ ಎಂದು ಹೇಳಿದರು.

ಟಿಂಬರ್ ಕಾರ್ಮಿಕರ ಸಂಘದ ತಾಲೂಕು ಅಧ್ಯಕ್ಷ ಷಹಜಾನ್ ಮಾತನಾಡಿ, ಟಿಂಬರ್ ಕೆಲಸ ಅತ್ಯಂತ ಕಷ್ಟಕರ ಮತ್ತು ಅಪಾಯಕಾರಿ. ಹಲವಾರು ಕಾರ್ಮಿಕರು ಕೆಲಸದ ವೇಳೆ ಮೃತಪಟ್ಟಿರುವ ಘಟನೆಗಳಿವೆ. ಕುಟುಂಬದ ಏಕೈಕ ದುಡಿಯುವ ಸದಸ್ಯ ಮೃತಪಟ್ಟರೆ ಆ ಕುಟುಂಬ ಸಂಕಷ್ಟಕ್ಕೆ ಸಿಲುಕುತ್ತದೆ. ಆದ್ದರಿಂದ, ಕಾರ್ಮಿಕರು ಮೃತಪಟ್ಟಲ್ಲಿ ಅವರ ಕುಟುಂಬಕ್ಕೆ ಕನಿಷ್ಠ ಪರಿಹಾರ ದೊರಕುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ವಸತಿ, ಆರೋಗ್ಯ ಮತ್ತು ಮಕ್ಕಳ ಶಿಕ್ಷಣಈ ಮೂರು ಪ್ರಮುಖ ಸಮಸ್ಯೆಗಳನ್ನು ಸರ್ಕಾರ ಆದ್ಯತೆಯಿಂದ ಬಗೆಹರಿಸಬೇಕು ಎಂದರು.

ಮಾಜಿ ಶಾಸಕ ಎಚ್.ಎಂ. ವಿಶ್ವನಾಥ್, ಎಐಟಿಯುಸಿ ಜಿಲ್ಲಾ ಅಧ್ಯಕ್ಷ ಎಂ.ಸಿ.ಡೋಂಗ್ರೆ, ತಾಲೂಕು ಅಧ್ಯಕ್ಷ ಹರೀಶ್, ಟಿಂಬರ್ ಕಾರ್ಮಿಕರ ಸಂಘದ ಗೌರವಾಧ್ಯಕ್ಷ ದೇವರಾಜ್, ಉಪಾಧ್ಯಕ್ಷ ಸೋಮಶೇಖರ್, ಕಾರ್ಯದರ್ಶಿ ದೇವರಾಜ್, ಖಜಾಂಚಿ ಸತೀಶ್ ಇತರರಿದ್ದರು.

# ನಿಯಮಿತ ಆರೋಗ್ಯ ತಪಾಸಣೆ ಜೀವನ ಪದ್ಧತಿಯಾಗಲಿ: ಸಿಮೆಂಟ್ ಮಂಜು

ಸಕಲೇಶಪುರ: ರೋಗಗಳು ಬರುವ ಮುನ್ನವೇ ಎಚ್ಚರ ವಹಿಸಿದರೆ ಆಸ್ಪತ್ರೆ ಹಾಗೂ ಮಾತ್ರೆಗಳ ಅವಲಂಬನೆ ಕಡಿಮೆ ಮಾಡಬಹುದು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ತಾಲ್ಲೂಕಿನ ಬಾಳ್ಳುಪೇಟೆಯ ಶ್ರೀ ಕೆಂಚಮ್ಮ ಮಲ್ಲೇಗೌಡ ಸಮುದಾಯ ಭವನದಲ್ಲಿ ಬಿಜೆಪಿ ಮುಖಂಡ ಜಯಪ್ರಕಾಶ್ ದೊಡ್ಡದಿಣ್ಣೆ ಅವರ ನೇತೃತ್ವದಲ್ಲಿ ಮಂಗಳೂರಿನ ಫಾದರ್ ಮುಲ್ಲರ್ ಆಸ್ಪತ್ರೆ ಹಾಗೂ ಯುವ ವೈದ್ಯ ಡಾ. ಲಕ್ಷ್ಮಣ್ ಗಂಗಾ ಅವರ ನೇತತ್ವದಲ್ಲಿ ಆಯೋಜಿಸಿದ್ದ ಆರೋಗ್ಯ ಉಚಿತ ಶಿಬಿರ ಉದ್ಘಾಟಿಸಿ ಮಾತನಾಡಿದರು.

ಆರೋಗ್ಯವಾಗಿದ್ದರೆ ಮಾತ್ರ ಸುಖ ಜೀವನ ನಡೆಸಲು ಸಾಧ್ಯ. ಇಲ್ಲದಿದ್ದರೆ ದುಡಿದ ಹಣವನ್ನೆಲ್ಲಾ ಆಸ್ಪತ್ರೆಗಳಿಗೆ ಖರ್ಚು ಮಾಡಬೇಕಾಗುತ್ತದೆ. ಆದ್ದರಿಂದ ರೋಗದ




ಲಕ್ಷಣಗಳು ಕಾಣಿಸುವುದಕ್ಕೂ ಮುನ್ನವೇ ಕಾಲಕಾಲಕ್ಕೆ ಆರೋಗ್ಯ ತಪಾಸಣೆ ಮಾಡಿಸಿಕೊಂಡು ವೈದ್ಯರು ನೀಡುವ ಸಲಹೆಗಳನ್ನು ಪಾಲಿಸಬೇಕು ಎಂದು ಸಲಹೆ ನೀಡಿದರು.

ಆರೋಗ್ಯ ಶಿಬಿರಗಳು ಬಡವರಿಗೆ ಹೆಚ್ಚಿನ ಅನುಕೂಲ ಕಲ್ಪಿಸುತ್ತವೆ. ಇಂತಹ ಶಿಬಿರಗಳನ್ನು ಗ್ರಾಮೀಣ ಪ್ರದೇಶಗಳಲ್ಲಿ ಹೆಚ್ಚಾಗಿ ಆಯೋಜಿಸುವ ಅಗತ್ಯವಿದೆ. ಇಂದಿನ ಒತ್ತಡಪೂರ್ಣ ಜೀವನದಲ್ಲಿ ಆರೋಗ್ಯವನ್ನು ಕಾಪಾಡಿಕೊಳ್ಳುವುದು ಸವಾಲಾಗಿದ್ದು, ಇಂತಹ ಶಿಬಿರಗಳು ಗ್ರಾಮೀಣ ಜನತೆಗೆ ಸಹಕಾರಿಯಾಗುತ್ತವೆ ಎಂದು ತಿಳಿಸಿದರು. ಸುಮಾರು 500ಕ್ಕೂ ಹೆಚ್ಚು ರೋಗಿಗಳಿಗೆ ಆರೋಗ್ಯ ತಪಾಸಣೆ ನಡೆಸಲಾಯಿತು.

ಮಾಜಿ ಶಾಸಕ ಎಚ್.ಎಂ. ವಿಶ್ವನಾಥ್, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯೆ ಚಂಚಲ ಕುಮಾರಸ್ವಾಮಿ, ಶಾಸಕ ಸಿಮೆಂಟ್ ಮಂಜು ಧರ್ಮಪತ್ನಿ ಪ್ರತಿಭಾ ಮಂಜುನಾಥ್, ಹಿಂದೂಪರ ಸಂಘಟನೆಗಳ ಮುಖಂಡ ರಘು ಸಕಲೇಶಪುರ, ಕರವೇ ಜಿಲ್ಲಾ ಕಾರ್ಯದರ್ಶಿ ರಘು ಪಾಳ್ಯ, ಬಿಜೆಪಿ ಜಿಲ್ಲಾ ಮಹಿಳಾ ಮೋರ್ಚಾ ಅಧ್ಯಕ್ಷೆ ನೇತ್ರಾವತಿ ಮಂಜುನಾಥ್, ಯಡೇಹಳ್ಳಿ ಮಂಜುನಾಥ್ ಮತ್ತಿತರರಿದ್ದರು.

### ಯುವ ವೈದ್ಯನ ಸೇವೆಗೆ ಶ್ಲಾಘನೆ

ಗ್ರಾಮೀಣ ಪ್ರದೇಶದ ಜನರ ಆರೋಗ್ಯದ ಕಡೆ ವಿಶೇಷ ಆಸಕ್ತಿ ವಹಿಸಿ ಆರೋಗ್ಯ ಉಚಿತ ಶಿಬಿರವನ್ನು ಆಯೋಜಿಸಿರುವ ತಾಲೂಕು ಬಿಜೆಪಿ ಉಪಾಧ್ಯಕ್ಷ ಜಯಪ್ರಕಾಶ್ ದೊಡ್ಡದಿಣ್ಣೆ ಅವರ ಸುಪುತ್ರ ಡಾ. ಲಕ್ಷ್ಮಣ್ ಗಂಗಾ ಅವರ ಸೇವೆ ಶ್ಲಾಘನೀಯ ಎಂದು ಶಾಸಕ ಸಿಮೆಂಟ್ ಮಂಜು ಮೆಚ್ಚುಗೆ ವ್ಯಕ್ತಪಡಿಸಿದರು.

ಗ್ರಾಮೀಣ ಜನರಿಗೆ ಗುಣಮಟ್ಟದ ಆರೋಗ್ಯ ಸೇವೆ ತಲುಪಿಸುವ ನಿಟ್ಟಿನಲ್ಲಿ ಇಂತಹ ಶಿಬಿರಗಳು ಮಹತ್ವದ ಪಾತ್ರ ವಹಿಸುತ್ತವೆ. ಜನಸಾಮಾನ್ಯರ ಆರೋಗ್ಯದ ಬಗ್ಗೆ ಕಾಳಜಿ ತೋರಿರುವ ಯುವ ವೈದ್ಯರ ಈ ಪ್ರಯತ್ನ ಇತರರಿಗೆ ಮಾದರಿಯಾಗಬೇಕು ಎಂದು ಅಭಿಪ್ರಾಯಪಟ್ಟರು.

# ಆಗಸ್ಟ್ 21 ರಿಂದ 23ರ ವರೆಗೆ ವಿಶೇಷ ಲೋಕ ಅದಾಲತ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸರ್ವೋಚ್ಚ ನ್ಯಾಯಾಲಯ, ರಾಷ್ಟ್ರೀಯ ಮತ್ತು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನ ಹಿನ್ನೆಲೆಯಲ್ಲಿ ಆ. 21 ರಿಂದ 23ರ ವರೆಗೆ ವಿಶೇಷ ಲೋಕ್ ಅದಾಲತ್ ಹಮ್ಮಿಕೊಳ್ಳಲಾಗಿದೆ.

ವಿಶೇಷ ಲೋಕ ಅದಾಲತ್ ಅನ್ನು ತಾಲ್ಲೂಕು ಮಟ್ಟದಿಂದ ರಾಷ್ಟ್ರಮಟ್ಟದ ವರೆಗೂ ಹಮ್ಮಿಕೊಳ್ಳಲಾಗಿದ್ದು, ಪ್ರಕರಣಗಳನ್ನು ರಾಜಿ ಮೂಲಕ ಬಗೆಹರಿಸಿಕೊಳ್ಳಲು ಸಿದ್ಧವಿರುವ ಉಭಯಪಕ್ಷಗಾರರು ಸ್ಥಳೀಯ ನ್ಯಾಯಾಲಯಗಳಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಪೂರ್ವ ಸಂಧಾನ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ಸದರಿ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಬಹುದಾಗಿದೆ ಎಂದು ಜಿಲ್ಲಾ ಮತ್ತು ಸತ್ರ, ನ್ಯಾಯಾಧೀಶರಾದ ಹೇಮಾವತಿ ಹೇಳಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಜಿ.ಕೆ. ದಾಕ್ಷಾಯಿಣಿ ಉಪಸ್ಥಿತರಿದ್ದರು.

# ಬುದ್ಧನ ತತ್ವಾದರ್ಶ ಎಂದೆಂದಿಗೂ ಜೀವಂತ: ಲಕ್ಷ್ಮಣ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಚನ್ನರಾಯಪಟ್ಟಣ: ಭಗವಾನ್ ಬುದ್ಧನ ತತ್ವ ಮತ್ತು ಬೋಧನೆಗಳು ಕೇವಲ ಒಂದು ದಿನಕ್ಕೆ ಸೀಮಿತವಾಗದೆ, ಜೀವನದ ಪ್ರತಿ ಹಂತದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಪ್ರಜಾ ವಿಮೋಚನಾ ಚಳವಳಿ ಜಿಲ್ಲಾಧ್ಯಕ್ಷ ಲಕ್ಷ್ಮಣ್ ಬಡಕನಹಳ್ಳಿ ಹೇಳಿದರು.

ತಾಲೂಕು ಆಡಳಿತದ ಪಟ್ಟಣದ ಮಿನಿವಿಧಾನ ಸೌಧದಲ್ಲಿ ನಡೆದ ಭಗವಾನ ಬುದ್ಧ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿ, ಬುದ್ಧನು ಇಡೀ ಜಗತ್ತಿಗೆ ಶಾಂತಿ ಮತ್ತು ಜ್ಞಾನದ ಬೆಳಕನ್ನು ನೀಡಿದ ಮಹಾಪುರುಷ ಅವರ ದಮ್ಮದ ಹಾದಿಯಲ್ಲಿ ನಡೆದರೆ ಮಾತ್ರ ಸಮ ಸಮಾಜದ ನಿರ್ಮಾಣ ಸಾಧ್ಯ ಎಂದು ಹೇಳಿದರು.

ಅಜ್ಞಾನದಿಂದ ಜ್ಞಾನದತ್ತ, ಅಸತೋಮಾ ಸದ್ಗಮಯ, ತಮಸೋಮಾ ಜ್ಯೋತಿರ್ಗಮಯ ಎಂಬ ಮಂತ್ರದಂತೆ, ಮನುಷ್ಯನ ಅಜ್ಞಾನದ ಕತ್ತಲೆಯನ್ನು ಹೋಗಲಾಡಿಸಿ ಸುಜ್ಞಾನದ ಹಾದಿಯಲ್ಲಿ ನಡೆಸುವ ಶಕ್ತಿ ಬುದ್ಧನ ಬೋಧನೆಗಳಿಗಿದೆ ಎಂದು ತಿಳಿಸಿದರು.

ಬುದ್ಧನ ತತ್ವಗಳಿಂದ ಪ್ರೇರಿತರಾದ ಡಾ. ಬಿ.ಆರ್. ಅಂಬೇಡ್ಕರ್ ಭಾರತಕ್ಕೆ ಉತ್ತಮ ಸಂವಿಧಾನವನ್ನು ನೀಡುವ ಮೂಲಕ ಸಮಾನತೆಯ ಆಶಯವನ್ನು ಎತ್ತಿ ಹಿಡಿದಿದ್ದಾರೆ. ಆ ದಾರಿಯಲ್ಲಿ ಸಾಗುವುದು ನಮ್ಮೆಲ್ಲರ ಕರ್ತವ್ಯ ಎಂದರು.

ದಲಿತ ಮುಖಂಡ ಸಿ.ಜಿ. ಸೋಮಶೇಖರ್ ಮಾತನಾಡಿ, ಪ್ರತಿಯೊಬ್ಬ ವ್ಯಕ್ತಿಯು ತನ್ನ ಒಳಗಿನ ಕೋಪ, ಅಸೂಯೆ ಮತ್ತು ದ್ವೇಷವನ್ನು ತ್ಯಜಿಸಿದಾಗ ಮಾತ್ರ ಸಮಾಜದಲ್ಲಿ ಶಾಂತಿ ನೆಲೆಸಲು ಸಾಧ್ಯ. ಬುದ್ಧನು ತೋರಿದ ಅಹಿಂಸೆಯ ಮಾರ್ಗವು ಇಂದಿನ ಅಶಾಂತಿಯುತ ಜಗತ್ತಿಗೆ ಅತಿ ಅವಶ್ಯಕವಾಗಿದೆ. ಮನುಷ್ಯನು ಸುಸಂಸ್ಕೃತನಾಗಿ ಬಾಳಲು ಪಂಚಶೀಲ ತತ್ವಗಳನ್ನು ಅನುಸರಿಸಬೇಕು. ಸುಳ್ಳು ಹೇಳದಿರುವುದು, ಹಿಂಸೆ ಮಾಡದಿರುವುದು ಮತ್ತು ಮದ್ಯಪಾನದಿಂದ ದೂರವಿರುವುದು ವ್ಯಕ್ತಿಯ ಗೌರವವನ್ನು ಹೆಚ್ಚಿಸುತ್ತದೆ. ರಾಜಗೃಹದಲ್ಲಿ ಬುದ್ಧನ ಪ್ರವಚನ ಕೇಳಲು ಲಕ್ಷಾಂತರ ಜನ ಸೇರಿದ್ದರೂ, ಅಲ್ಲಿ ನೆಲೆಸಿದ್ದ ನಿಶ್ಯಬ್ದ ಮತ್ತು ಆಧ್ಯಾತ್ಮಿಕ ಶಕ್ತಿಯನ್ನು ಕಂಡು ಅಂದಿನ ರಾಜನೇ ಅಚ್ಚರಿಗೊಂಡಿದ್ದ ಈ ಮೂಲಕ, ಶಿಸ್ತು ಮತ್ತು ಶಾಂತಿಯ ಮಹತ್ವವನ್ನು ಸಾರಿದರು. ಸುಮಾರು 2,500 ವರ್ಷಗಳ ಹಿಂದಿನ ಬುದ್ಧನ ಜ್ಞಾನದ ದೀಪ್ತಿ ಇಂದಿಗೂ ಪ್ರಜ್ವಲಿಸುತ್ತಿದೆ. ಮುಂದಿನ ಪೀಳಿಗೆಗೆ ಈ ಬೋಧನೆಗಳನ್ನು ತಲುಪಿಸುವುದು ನಮ್ಮ ಜವಾಬ್ದಾರಿಯಾಗಿದ್ದು. ಬುದ್ಧನು ಸಾರಿದ ಸಮಾನತೆಯ ಸಂದೇಶವನ್ನು ಡಾ. ಬಿ.ಆರ್. ಅಂಬೇಡ್ಕರ್ ಅವರು ಭಾರತೀಯರಿಗೆ ಧಮ್ಮ ದೀಕ್ಷೆ ಮೂಲಕ ನೀಡಿದರು. ಜಾತಿ ವ್ಯವಸ್ಥೆಯ ಕಪಿಮುಷ್ಟಿಯಿಂದ ಹೊರಬಂದು ಮನುಷ್ಯತ್ವವನ್ನು ಗೌರವಿಸುವ ಸಂಸ್ಕೃತಿ ಬೆಳೆಯಬೇಕು ಎಂದರು.

ಬುದ್ಧ ಎಂದರೆ ಕೇವಲ ಒಬ್ಬ ವ್ಯಕ್ತಿಯಲ್ಲ, ಅದೊಂದು ನಿರಂತರವಾಗಿ ಹರಿಯುವ ಜ್ಞಾನದ ಧಾರೆ, ನಾವು ನಮ್ಮ ಮನೆಯಲ್ಲಿ ಬುದ್ಧನ ಫೋಟೋ ಇಡುವುದಕ್ಕಿಂತ ಮಿಗಿಲಾಗಿ, ನಮ್ಮ ಹೃದಯದಲ್ಲಿ ಬುದ್ಧನ ತತ್ವಗಳನ್ನು ಇಟ್ಟುಕೊಳ್ಳಬೇಕು ಎಂದರು. ನಮಗೆ ಆಯುಧ ಹಿಡಿಯುವ ಯುದ್ಧ ಬೇಡ, ಬದಲಿಗೆ ಜನರ ಮನಸ್ಸನ್ನು ಗೆಲ್ಲುವ ಬುದ್ಧ ಬೇಕು. ಕರುಣೆ ಮತ್ತು ಮೈತ್ರಿಯ ಮೂಲಕ ಮಾತ್ರ ಜಗತ್ತನ್ನು ಬದಲಾಯಿಸಲು ಸಾಧ್ಯ ಎಂದು ತಿಳಿಸಿದರು.

ಸಿ. ಎನ್.ಅರುಣ್‌ಕುಮಾರ್ ಮಾತನಾಡಿ, ಬುದ್ಧನ ಬೋಧನೆಗಳು ಕೇವಲ ಧಾರ್ಮಿಕ ಚೌಕಟ್ಟಿಗೆ ಸೀಮಿತವಾಗಿಲ್ಲ, ಅವು ವೈಜ್ಞಾನಿಕ ಮತ್ತು ಮಾನವೀಯ ಮೌಲ್ಯಗಳಾಗಿವೆ ಎಂದು ಹೇಳಿದರು.

ಸಮಾಜದಲ್ಲಿ ಹಾಸುಹೊಕ್ಕಾಗಿರುವ ಮೂಢ ನಂಬಿಕೆಗಳನ್ನು ಕಿತ್ತೊಗೆಯಲು ಬುದ್ಧನ ಬೌದ್ಧಿಕ ಕ್ರಾಂತಿ ಇಂದಿಗೂ ಅಗತ್ಯವಾಗಿದೆ. ವೈಜ್ಞಾನಿಕ ಮನೋಭಾವನೆಯನ್ನು ಬೆಳೆಸಿಕೊಳ್ಳುವುದೇ ಬುದ್ಧನಿಗೆ ನಾವು ಸಲ್ಲಿಸುವ ನಿಜವಾದ ಗೌರವ ಎಂದು ಅವರು ತಿಳಿಸಿದರು.

ಜಿಲ್ಲಾ ಪಂಚಾಯಿತಿ ಅಧ್ಯಕ್ಷೆ ಮಹದೇವಮ್ಮ, ಶಂಕರ್ ನುಗ್ಗೇಹಳ್ಳಿ, ಹೊಸಹಳ್ಳಿ ರಾಮಣ್ಣ, ನರಸಿಂಹಯ್ಯ, ಜ್ಯೋತಿ ಲಕ್ಷ್ಮಿ ಇತರರಿದ್ದರು.

# ಮೊದಲ ಮಳೆಯಿಂದ ರೈತರಲ್ಲಿ ಮೂಡಿದ ಸಂತಸ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ತಾಲ್ಲೂಕಿನಾದ್ಯಂತ ಶುಕ್ರವಾರ ಸಂಜೆ ಮಿಂಚು, ಗುಡುಗು ಹಾಗೂ ಸಿಡಿಲಿನ ಅಬ್ಬರದೊಂದಿಗೆ ವ್ಯಾಪಕವಾಗಿ ಮಳೆ ಸುರಿದಿದ್ದು ರೈತರಲ್ಲಿ ಸಂತಸ ತಂದಿದೆ.

ಕಳೆದ ಒಂದು ವಾರದಿಂದ ಒಂದೆರಡು ಬಾರಿ ಮೋಡ ಕವಿದ ವಾತಾವರ ಸೃಷ್ಟಿಯಾಗಿದ್ದು ಅಲ್ಲಲ್ಲಿ ಕೆಲವೆಡೆ ಸೋನೆ ಮಳೆ ಸುರಿದಿತ್ತು. ಇದರಿಂದ ಇದ್ದಕ್ಕಿದ್ದಂತೆಯೇ ಮತ್ತಷ್ಟು ಬಿಸಿಲಿನ ತಾಪಮಾನ ಏರಿಕೆಯಾಗಿದ್ದು ಸಾರ್ವಜನಿಕರಲ್ಲಿ ಬೇಸರ ವ್ಯಕ್ತವಾಗಿತ್ತು.

ಆದರೆ ಶುಕ್ರವಾರ ಸಂಜೆ 5.15 ರಲ್ಲಿ ಮಿಂಚು, ಗುಡುಗಿನೊಂದಿಗೆ ಮಳೆ ಪ್ರಾರಂಭಗೊಂಡು ಸಂಜೆ 6 ಗಂಟೆ ರವರೆಗೆ ಧಾರಾಕಾರವಾಗಿ ಸುರಿಯಿತು. ಪ್ರಾರಂಭದಲ್ಲಿ ಬಿರುಗಾಳಿ ಬೀಸಿತಾದರೂ ನಂತರದಲ್ಲಿ ಗಾಳಿ ಕಡಿಮೆಯಾಯಿತು. ಆದರೆ ಸಿಡಿಲು ಮಾತ್ರ ಜನರನ್ನು ಬೆಚ್ಚಿ ಬೀಳಿಸುವಂತೆ ಬಡಿಯಿತು.

ಮಾರ್ಚ್ ಹಾಗೂ ಏಪ್ರಿಲ್ ತಿಂಗಳಲ್ಲಿ ಬಿಸಿಲು ಹೇರಳವಾಗಿದ್ದು ಜನರು ಮನೆಯಿಂದ ಹೊರಬರಲು ಭಯ ಪಡುವಂತಾಗಿತ್ತು. ದಿನದಿಂದ ದಿನಕ್ಕೆ ಬಿಸಿಲಿನ ತಾಪಮಾನ ಹೆಚ್ಚಿದ್ದರಿಂದ ಜಾನುವಾರುಗಳನ್ನು ಜಮೀನುಗಳಿಗೆ ಕರೆದೊಯ್ಯಲು ಆಗದೆ ಕೊಟ್ಟಿಗೆಗಳಲ್ಲಿಯೇ ಕಟ್ಟಿ ಮೇವು ಮತ್ತು ನೀರಿನ ವ್ಯವಸ್ಥೆ ಮಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿತ್ತು.

ಯುಗಾದಿ ಹಬ್ಬದ ನಂತರದ 15 ದಿನಗಳಲ್ಲಿ ಮಳೆ ಪ್ರಾರಂಭವಾಗುವುದು ವ್ಯಾಪ್ತಿಯಲ್ಲಿ ವಾಡಿಕೆ. ಆದರೆ



ಈ ಬಾರಿ ಯುಗಾದಿ ಹಬ್ಬ ಕಳೆದು ಎರಡು ತಿಂಗಳು ಸಮೀಪಿಸಿದರು ಮಳೆ ಪ್ರಾರಂಭವಾಗದೆ ಇರುವುದರಿಂದ ರೈತರಲ್ಲಿ ಆತಂಕ ಮನೆ ಮಾಡಿತ್ತು. ತಾಲ್ಲೂಕಿನಲ್ಲಿ ಬರದ ಛಾಯೆ ಆವರಿಸಿಕೊಂಡಿತ್ತು.

ಧಾರಾಕಾರವಾಗಿ ಸುರಿದ ಮಳೆಯು ತಂಪು ಎರೆದಿದೆ. ಇನ್ನು ಮುಂಗಾರು ಹಂಗಾಮಿನ ಬಿತ್ತನೆ ಬೀಜಗಳನ್ನು ರೈತರು ಸಂಗ್ರಹಿಸಿಕೊಂಡಿದ್ದರು. ಸದ್ಯ ಮಳೆ ಸುರಿದಿದ್ದರಿಂದ ಮುಂಗಾರು ಬಿತ್ತನೆಗೆ ಹೆಚ್ಚಿನ ಅನುಕೂಲವಾಗಿದೆ ಎಂದು ಪಿ.ಹೊಸಹಳ್ಳಿ ಗ್ರಾಮದ ಯುವರೈತ ಎಚ್ ಕೆ.ಗೋವಿಂದರಾಜು ಸಂತಸ ವ್ಯಕ್ತಪಡಿಸಿದ್ದಾರೆ.

ಸಾಕಷ್ಟು ಬಾರಿ ಸಿಡಿಲು ಬಡಿದಿದ್ದರಿಂದ ತಾಲ್ಲೂಕಿನ ಚಿಣ್ಣೇನಹಳ್ಳಿ ಗ್ರಾಮದಲ್ಲಿ ತೆಂಗಿನ ಮರವೊಂದು ಒತ್ತಿ ಉರಿದಿದೆ. ಅಲ್ಲದೆ ಮನೆಗಳ ಗೋಡೆ ಕುಸಿದಿರುವ, ಮರ-ಮಂಡಿಗಳು ನೆಲಕ್ಕುರಳಿರುವ ಹಾಗೂ ಇತರೆ ಅನಾಹುತಗಳ ಬಗ್ಗೆ ಸದ್ಯಕ್ಕೆ ಯಾವುದೇ ಮಾಹಿತಿ ಲಭ್ಯವಾಗಿರುವುದಿಲ್ಲ.

# ಬಾಗೇಶ್ವರದಲ್ಲಿ ಅರ್ಥಪೂರ್ಣ ತಿಂಗಳ ಹುಣ್ಣಿಮೆ ಕಾರ್ಯಕ್ರಮ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ: ತಾಲ್ಲೂಕಿನ ಬಾಗೇಶ್ವರ ಗ್ರಾಮದಲ್ಲಿ ಗ್ರಾಮ ದೇವತೆ ಮೈಸೂರುಮ್ಮ ದೇವಿಯ ನೂತನ ದೇವಾಲಯದ ಸವಿ ನೆನಪು ಹಾಗೂ ಗುರು ತೋರಿದ ದಾರಿ ಚಂದ ಮಾಮನ ತೇರು 140ರ ಸಂಭ್ರಮ ಅರ್ಥಪೂರ್ಣವಾಗಿ ನೆರವೇರಿತು.

ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಶಂಭುನಾಥ ಸ್ವಾಮಿಜಿ ಅವರನ್ನು ಮಂಗಳವಾದ್ಯ ಸಮೇತ ಪೂರ್ಣ ಕುಂಭದೊಂದಿಗೆ ಸ್ವಾಗತಿಸಿದ ಗ್ರಾಮಸ್ಥರು ನಂತರ ಪಾದಪೂಜೆ ಮಾಡುವ ಮೂಲಕ ಗುರುಭಕ್ತಿ ಸಮರ್ಪಿಸಿದರು.

ನಂತರ ನಡೆದ ಧಾರ್ಮಿಕ ಸಮಾರಂಭದಲ್ಲಿ ಶಂಭುನಾಥ ಸ್ವಾಮೀಜಿ ಮಾತನಾಡಿ, ಹರ ಮುನಿದರೂ ಗುರು ಕಾಯುವನು. ಹಾಗಾಗಿ ಗುರುವಿಗೆ ನಮ್ಮ ಸನಾತನ ಸಂಸ್ಕೃತಿಯಲ್ಲಿ ವಿಶಿಷ್ಟವಾದ ಸ್ಥಾನ ನೀಡಲಾಗಿದೆ. ಗುರು-ಹಿರಿಯರನ್ನು ಗೌರವ ಭಾವದಿಂದ ಕಾಣುವ ಮನುಷ್ಯನ ನಡೆ-ನುಡಿಯನ್ನು ಭಗವಂತನು ಸಹ ಮೆಚ್ಚುತ್ತಾನೆ. ಅಂತಹ ಸಾರ್ಥಕ ಆದಿಯಲ್ಲಿ ಬಾಗೇಶ್ವರ ಗ್ರಾಮಸ್ಥರು ಸಾಗುತ್ತಿದ್ದು ತಮ್ಮ ನಡೆ ನುಡಿಯ ಸಂಸ್ಕಾರ ಇತರರಿಗೆ ಆದರ್ಶವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಭೈರವೈಕ್ಯ ಡಾ. ಬಾಲಗಂಗಾಧರನಾಥ ಸ್ವಾಮೀಜಿ ಅವರು ತೋರಿದ ಹಾದಿಯಲ್ಲಿ ಬೆಳದಿಂಗಳ ತೇರು ಸಂಚರಿಸುತ್ತಿದ್ದು ಗುರುವಿನ ಅನುಗ್ರಹದಿಂದ ಭಕ್ತ ವೃಂದದಲ್ಲಿ ಸಂಸ್ಕಾರದ ಬಾಂಧವ್ಯ ಬಲಗೊಳ್ಳುತ್ತಿರುವುದು ತಮಗೆ ಸಂತಸ ತಂದಿದೆ ಎಂದು ಹೇಳಿದರು.

ಶಾಸಕ ಕೆ.ಎಂ.ಶಿವಲಿಂಗೇಗೌಡ ಮಾತನಾಡಿ, ಆಧುನಿಕತೆಯ ನಾಗಾಲೋಟದಲ್ಲಿ ಮನುಷ್ಯ ಸಾಗುತ್ತಿದ್ದರೂ ಮನಸ್ಸಿಗೆ ಶಾಂತಿ ಮತ್ತು ನೆಮ್ಮದಿ ಬೇಕಾದರೆ ಆಧ್ಯಾತ್ಮಿಕತೆಯಲ್ಲಿ ಒಲವು ತಾಳುವುದರಿಂದ ಮಾತ್ರ ಸಾಧ್ಯ ಈ ನಿಟ್ಟಿನಲ್ಲಿ ಬಾಲ ಗಂಗಾಧರನಾಥ ಶ್ರೀಗಳು ತೋರಿದ ಮಾರ್ಗದಲ್ಲಿ ಹಾಸನ ಮಹಾ ಸಂಸ್ಥಾನ ಮಠದ ಶಂಭುನಾಥ ಸ್ವಾಮೀಜಿ ಸಾಗುತ್ತಿರುವುದಲ್ಲದೆ ಈ ಭಾಗದ ಭಕ್ತರಲ್ಲಿ ಧಾರ್ಮಿಕತೆಯ ಭಾವನೆ ಬೆಳೆಸುವ ಜತೆಗೆ ಸನ್ಮಾರ್ಗದಲ್ಲಿ ನಡೆಸಿಕೊಂಡು ಹೋಗುತ್ತಿದ್ದಾರೆ ಎಂದರು.

ಗುರು ತೋರಿದ ದಾರಿ ತಿಂಗಳ ಮಾಮನ ತೇರು ಕಾರ್ಯಕ್ರಮದ ಸಂಚಾಲಕ ಎಚ್.ಬಿ.ಮದನಗೌಡ ಮಾತನಾಡಿ, ಪೂಜ್ಯ ಬಾಲಗಂಗಾಧರನಾಥ ಮಹಾಸ್ವಾಮೀಜಿಗಳ ಸಂಕಲ್ಪ ಮತ್ತು ಅವರ ಆಶಯವನ್ನು ಹಾಸನ ಆದಿಚುಂಚನಗಿರಿ ಮಹಾ ಸಂಸ್ಥಾನ ಮಠದ ಶಂಭುನಾಥ ಸ್ವಾಮೀಜಿ ಅನುಷ್ಠಾನ ರೂಪಕ್ಕೆ ತಂದಿರುವುದಲ್ಲದೆ ಹಾಸನ ಹಾಗೂ ಕೊಡಗು ಜಿಲ್ಲಾದ್ಯಂತ ಧಾರ್ಮಿಕ,ಶೈಕ್ಷಣಿಕ ಮತ್ತು ಸಾಮಾಜಿಕ ಕ್ಷೇತ್ರದಲ್ಲಿ ವಿಶೇಷವಾಗಿ ಸಲ್ಲಿಸುತ್ತಿರುವ ಸೇವೆ ಇತರರಿಗೆ ಆದರ್ಶವಾಗಿದೆ ಎಂದರು.

ಬೊಚೇಹಳ್ಳಿ ಮಠದ ಶಿನಾನಂದ ಸ್ವಾಮೀಜಿ, ಗೀಜಿಹಳ್ಳಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಧರ್ಮೇಶ್, ಗ್ರಾಮದ ಶಿವಣ್ಣ, ನಿಂಗೇಗೌಡ, ನರಸಿಂಹೇಗೌಡ, ಮರಿಯಪ್ಪ, ನರಸೇಗೌಡ, ಧರ್ಮೇಶ್, ಅಯ್ಯಣ್ಣ, ಸಿದ್ದೇಗೌಡ ಇತರರಿದ್ದರು.

## ಇತಿಹಾಸದಲ್ಲಿ ಈ ದಿನ

### ಮೇ-03

1791: ಪೋಲ್ಯಾಂಡ್ ದೇಶದ ಮೇ 3ರ ಸಂವಿಧಾನ ಜಾರಿಗೆ ಬಂತು. ಇದು ಯೂರೋಪಿನ ಮೊದಲ ಲಿಖಿತ ಸಂವಿಧಾನಗಳಲ್ಲಿ ಒಂದಾಗಿದೆ.

1913: ಭಾರತದ ಮೊದಲ ಪೂರ್ಣ ಉದ್ದದ ಚಲನಚಿತ್ರ **Raja Harishchandra** ಅನ್ನು **Dadasaheb Phalke** ನಿರ್ಮಿಸಿ ಬಿಡುಗಡೆ ಮಾಡಿದರು. ಭಾರತೀಯ ಸಿನೆಮಾ ಇತಿಹಾಸದಲ್ಲಿ ಇದು ಮಹತ್ವದ ಮೈಲುಗಲ್ಲು.

1947: ಜಪಾನ್ ದೇಶದ ಹೊಸ ಸಂವಿಧಾನ ಜಾರಿಗೆ ಬಂದು ಪ್ರಜಾಸತ್ತಾತ್ಮಕ ವ್ಯವಸ್ಥೆಗೆ ಬಲ ನೀಡಿತು.

2013: **World Press Freedom Day** ಅನ್ನು ವಿಶ್ವದಾದ್ಯಂತ ಆಚರಿಸಲಾಗುತ್ತದೆ. ಇದು ಮಾಧ್ಯಮ ಸ್ವಾತಂತ್ರ್ಯದ ಮಹತ್ವವನ್ನು ಸಾರುವ ದಿನವಾಗಿದೆ.

ಜನನ

1469: **Niccolò Machiavelli**, ಪ್ರಸಿದ್ಧ ರಾಜಕೀಯ ಚಿಂತಕ

1933: **James Brown**, ಪ್ರಸಿದ್ಧ ಸಂಗೀತಗಾರ

# ಅಮೂರ್ತ ಕಲೆಯ ಕಲಾವಿದ ಬಿ.ಎಸ್. ದೇಸಾಯಿಗೆ 2025-26ನೇ ಸಾಲಿನ ಲಲಿತಕಲಾ ಅಕಾಡೆಮಿ ಪ್ರಶಸ್ತಿ

**- ಗೊರೂರು ಅನಂತರಾಜು, ಹಾಸನ**

ಹಾಸನದ ನಿವೃತ್ತ ಚಿತ್ರಕಲಾ ಶಿಕ್ಷಕರು, ಕಲಾವಿದರು ಬಿ.ಎಸ್.ದೇಸಾಯಿ ಅವರ ಕಲಾಸಾಧನೆಗೆ ಕರ್ನಾಟಕ ರಾಜ್ಯ ಲಲಿತ ಕಲಾ ಅಕಾಡೆಮಿಯ 2025-26ನೇ ಸಾಲಿನ ಗೌರವ ಪ್ರಶಸ್ತಿ ಒಲಿದು ಬಂದಿದೆ. ವಿಜಯಪುರ ಜಿಲ್ಲೆಯ ತಾಳಿಕೋಟೆಯಲ್ಲಿ ದಿನಾಂಕ 2-10-1965 ರಂದು ಜನಿಸಿದ ಇವರು ಹಾಸನದ ಬಾಲಕರ ಪದವಿ ಪೂರ್ವ ಕಾಲೇಜಿನಲ್ಲಿ ಚಿತ್ರಕಲಾ ಅಧ್ಯಾಪಕರಾಗಿ ಕರ್ತವ್ಯ ನಿರ್ವಹಿಸಿ ಇಲ್ಲಿಯೇ ನೆಲೆಸಿದ್ದಾರೆ. ನಾನು ಹಾಸನಕ್ಕೆ ಬಂದು 36 ವರ್ಷಗಳಾದವು ಗುರುವೇ (ಗೊರೂರು ಅನಂತರಾಜು) ಈ ಪರಿಸರವು ನನಗೆ ಪ್ರಿಯವಾಗಿ ಒಗ್ಗಿಹೋಯಿತು. ಬಂದ ಹೊಸದರಲ್ಲಿ ಊರ ಕಡೆಗೆ ವರ್ಗ ಮಾಡಿಸಿಕೊಳ್ಳುವ ಆಲೋಚನೆ ಇತ್ತಾದರೂ ಕಾಲಕ್ರಮೇಣ ಇಲ್ಲಿಯ ಕಲಾವಿದರು, ಸಾಹಿತಿಗಳ ಒಡನಾಟದಲ್ಲಿ ಇಲ್ಲಿಯೇ ಮನೆ ಮಾಡಿಕೊಂಡೆ ಎಂದು ಮನದುಂಬಿ ಹೇಳಿದರು. ಇವರು ಚಿತ್ರಕಲಾ ವ್ಯಾಸಂಗವು ಪ್ರಿ-ಯೂನಿವರ್ಸಿಟಿ ಕೋರ್ಸ್ (ವಾಣಿಜ್ಯ ಕಲೆ), ಡ್ರಾಯಿಂಗ್ ಮತ್ತು ಪೇಂಟಿಂಗ್‌ನಲ್ಲಿ ಡಿಪ್ಲೊಮಾ, ಡಿಪ್ಲೊಮಾ ಇನ್ ಆರ್ಟ್ ಮಾಸ್ಟರ್, ಮಾಸ್ಟರ್ ಆಫ್ ವಿಷುಯಲ್ ಆರ್ಟ್ ಆದರ್ಶ ಫೈನ್ ಆರ್ಟ್ ಕಾಲೇಜ್ ಇಂಡಿ ಇಲ್ಲಿ ಪಡೆದರು.

ಅಮೂರ್ತ ಕಲೆಯ ಕಲಾವಿದರು:

ಅಮೂರ್ತತೆಯ ಬೆಳವಣಿಗೆಯ ಹಿಂದಿನ ಪ್ರೇರಣೆಗಳಲ್ಲಿ ಒಂದು ವಿಷಯಗಳ ಪ್ರಪಂಚದಿಂದ ದೂರವಿರಲು ಅನೇಕ ಕಲಾವಿದರ ಬಲವಾದ



ಬಯಕೆಯಾಗಿದೆ. ಲೌಕಿಕ ಭೌತವಾದದ ಉಲ್ಲೇಖವನ್ನು ಬಹಿಷ್ಕರಿಸುವುದು ಅಮೂರ್ತ ಕಲಾವಿದರ ಕೇಂದ್ರ ಗುರಿಯಾಗಿದೆ. ಇದು ಔಪಚಾರಿಕ ಪರಿಶುದ್ಧತೆಯ ಹುಡುಕಾಟಕ್ಕೆ ಮತ್ತು ಅತಿಕ್ರಮಣಕ್ಕಾಗಿ ನಿರಂತರವಾದ ಮಾನವ ಅನ್ವೇಷಣೆಯನ್ನು ವ್ಯಕ್ತಪಡಿಸುವ ಮಾರ್ಗಗಳ ಪರಿಗಣನೆಗೆ ಎರಡಕ್ಕೂ ಕಾರಣವಾಯಿತು.

ದೇಸಾಯಿಯವರ ಕಲೆಯ ಪಯಣವೂ ಅದೇ ಹಾದಿಯಲ್ಲಿದೆ. ಯೋಗ ಮತ್ತು ಧ್ಯಾನದ ಸ್ವಾಭಾವಿಕತೆಯ ವರ್ಷಾಚರಣೆಯು ಅವರ ಹೊಸ ಅನ್ವೇಷಣೆಗೆ ಸರಿಹೊಂದುವಂತೆ ಆಧ್ಯಾತ್ಮಿಕ ಭಾಷೆಯನ್ನು ಹುಡುಕುವಂತೆ ಮಾಡುತ್ತದೆ. ಸುತ್ತಮುತ್ತಲಿನ ಜೀವನದಲ್ಲಿ ಪರಮಾರ್ಥದ ಅನ್ವೇಷಣೆಯಲ್ಲಿ ಅವರು ತನ್ನದೇ ಆದ ರೀತಿಯಲ್ಲಿ ಅದರ ಸಾರವನ್ನು ಅಮೂರ್ತಗೊಳಿಸುತ್ತಾರೆ. ಆಕಸ್ಮಿಕ ಟೆಕಶ್ಚರ್‌ಗಳಿಂದ ಸ್ಫೂರ್ತಿ ಪಡೆದ ಅವರು ಹೊಸ ದೃಶ್ಯ ಪ್ರಪಂಚವನ್ನು ರಚಿಸಲು ಕ್ಯಾನ್ವಾಸ್‌ನಲ್ಲಿ ತೇವವಾದ ಎಣ್ಣೆ ಬಣ್ಣಗಳ ಕೆಲವು ಭಾಗವನ್ನು ತೆಗೆದುಹಾಕುವ ಕೆರೆದು ಅಳಿಸುವ ವಿಧಾನವನ್ನು ರೂಪಿಸಿದರು. ಅಂತಿಮ ಫಲಿತಾಂಶವೆಂದರೆ ಐಷಾರಾಮಿ ಬಣ್ಣದ ಆರ್ಕೆಸ್ಟ್ರೇಶನ್ ಮತ್ತು ಅದ್ದೂರಿ ಸಂಯೋಜನೆಗಳು. ಕೆಲವೊಮ್ಮೆ ಅಧೀನಗೊಂಡ ತೇಲುವ ರೂಪಗಳು ಕೆಲವು ಗುರುತಿಸಬಹುದಾದ ರೂಪಗಳ ಉಪಸ್ಥಿತಿಯನ್ನು ಸೂಚಿಸುತ್ತವೆಯಾದರೂ ಕಲಾವಿದನ ಉದ್ದೇಶವು ಎದ್ದುಕಾಣುವ ಮಾನಸಿಕ ಭಾವನೆಗಳನ್ನು ಹೆಚ್ಚಿಸುವುದು. ಅವರ ವರ್ಣಚಿತ್ರಗಳು ಈ ಬಣ್ಣ ಮತ್ತು ವಿನ್ಯಾಸದ ಕಾರಣದಿಂದಾಗಿ ಮತ್ತು ಸರಳವಾದ ಸುಂಟರಗಾಳಿ ರೂಪಗಳ ಮೇಲೆ ಕೇಂದ್ರೀಕರಿಸುವ ಮೂಲಕ ಪ್ರೇಕ್ಷಕರನ್ನು ಹೀರಿಕೊಳ್ಳುತ್ತವೆ. ಅವರ ಪ್ರತಿಯೊಂದು ಕೃತಿಯು ಭವ್ಯವಾದ ದೃಶ್ಯ ಕಾವ್ಯದ ಭಾವನೆಗಳನ್ನು ಉಂಟುಮಾಡುತ್ತದೆ. ಸಿ.ಎಸ್. ಕೃಷ್ಣಶೆಟ್ಟಿ ವಿಮರ್ಶಕರು ಅಭಿಪ್ರಾಯದಂತೆ ದೇಸಾಯಿಯವರ ಕೆಲಸವನ್ನು ಅವರ ಆತ್ಮದ ಭೂದೃಶ್ಯ ಎಂದು ಕರೆಯಬಹುದು. ಆದರೆ ಇದು ಕಲಾವಿದ




ಭಾವುಕ ಎಂದು ಸೂಚಿಸುವುದಿಲ್ಲ. ಅವರ ವರ್ಣಚಿತ್ರಗಳು ಭಾರತದ ಆಳವಾದ ವ್ಯಕ್ತಿತ್ವದ ಖಚಿತವಾದ ಪ್ರಭಾವವನ್ನು ಹೊಂದಿವೆ. ಅವರ ಬಣ್ಣಗಳ ವ್ಯಾಪ್ತಿಯು ಎದ್ದುಕಾಣುವ ಆದರೆ ಸಮಚಿತ್ತದಿಂದ ಅವರು ಸಾಧಿಸಿದ ಒಂದು ನಿರ್ದಿಷ್ಟ ಪರಿಶುದ್ಧತೆಯನ್ನು ವ್ಯಕ್ತಪಡಿಸುತ್ತಾರೆ. ಅವರ ಕುಂಚದ ಹೊಡೆತಗಳು ಅತೀಂದ್ರಿಯ ತೀವ್ರತೆಯನ್ನು ಎತ್ತಿ ತೋರಿಸುತ್ತವೆ. ಅವರ ಆಕೃತಿಗಳು ಅಮೂರ್ತವಲ್ಲ ಆದರೆ ಸಾಮರಸ್ಯ. ಇದು ಸಂಯೋಜನೆಗಳು ನಿರ್ಗರ್ವಿಯಾಗಿ ಅಸ್ತಿತ್ವದಲ್ಲಿರಲು ಶಕ್ತಗೊಳಿಸುತ್ತದೆ. ಸಂಯೋಜನೆಗಳ ಮನೋಧರ್ಮವು ಒಟ್ಟಾರೆ ಮನಸ್ಥಿತಿಗೆ ಪೂರಕವಾಗಿದೆ, ಮಾನಸಿಕ ಅಥವಾ ಆಧ್ಯಾತ್ಮಿಕ ಅಂಶಗಳಿಂದ ಗುಣಗಳನ್ನು ಪುಷ್ಟೀಕರಿಸಲಾಗುತ್ತದೆ. ಅವರ ಕಲೆಯು ಮೂಲಭೂತವಾಗಿ ಸಂತಾನ ಮೌಲ್ಯಗಳೊಂದಿಗೆ ಬಲವಾದ ನಂಬಿಕೆಯ ಅಭಿವ್ಯಕ್ತಿಯಾಗಿದೆ.

ಪೂಜ್ಯತೆ ಮತ್ತು ನಮ್ರತೆ ಸ್ಪಷ್ಟವಾಗಿದೆ, ಜೊತೆಗೆ ಉತ್ತಮ ಸಂತಾನೋತ್ಪತ್ತಿ ಮತ್ತು ಆಂತರಿಕ ಸಂಸ್ಕೃತಿಯನ್ನು ಸೂಚಿಸುವ ಹಿಂಜರಿಕೆ. ಕಲಾವಿದನು ತಾನು ನಿಜವಾಗಿಯೂ ಚಿತ್ರಿಸಲು ಇಷ್ಟಪಡುವುದನ್ನು ಚಿತ್ರಿಸುವ ಕೌಶಲ್ಯವನ್ನು ಹೊಂದಿದ್ದಾನೆ, ಗಟ್ಟಿಯಾದ ಬಣ್ಣದಲ್ಲಿ ಜೋರಾಗಿ ಕೂಗದಿರುವ ಚಾತುರ್ಯವನ್ನು ಅವನು ಹೊಂದಿದ್ದಾನೆ. ಅವರ ಕುಂಚದ ಕೆಲಸವು ಬ್ರಷ್ ಅಲ್ಲ.

ದೇಸಾಯಿ ಅವರು ಆಧುನಿಕ ವರ್ಣಚಿತ್ರಕಾರರಾಗಿದ್ದು ಅವರು ಆಳವಾದ ಭಾವನೆಗಳು ಮತ್ತು ಜೀವನದಲ್ಲಿ ತಮ್ಮದೇ ಆದ ಸತ್ಯವನ್ನು ಚಿತ್ರಿಸುತ್ತಾರೆ ಎಂಬುದು ನವದೆಹಲಿಯ ಕೇಶವ್ ಮಲಿಕ್ ಅವರ ಅಭಿಪ್ರಾಯವಾಗಿದೆ.

ಇನ್ನು ದೇಸಾಯಿ ಸಾಧನೆಯ ಹಾದಿಯ ಹಿಂದೆ ಹುಡುಕಿ ಹೋದರೆ ಅವರ ಏಕವ್ಯಕ್ತಿ ಪ್ರದರ್ಶನಗಳಲ್ಲಿ ಸಬ್ಲೈಮ್ ಆರ್ಟ್ ಗ್ಯಾಲರಿ, ಬೆಂಗಳೂರು (2018-19) ಯುಬಿ ನಗರ,ಬೆಂಗಳೂರು-2011, ಕರ್ನಾಟಕ ಚಿತ್ರಕಲಾ ಪರಿಷತ್ತು ಬೆಂಗಳೂರು-2010, ಕರ್ನಾಟಕ ಚಿತ್ರಕಲಾ ಪರಿಷತ್ತು ಬೆಂಗಳೂರು-2005, ಸಂಸ್ಕೃತ ಭವನ ಹಾಸನ-2005, ಕಲಾಕೃತಿ ಪ್ರದರ್ಶನ, ಬೆಂಗಳೂರು-1989 ಮುಖ್ಯವಾಗಿವೆ.

ಇವರು ಭಾಗವಹಿಸಿದ ಶಿಬಿರ ಕಾರ್ಯಾಗಾರಗಳಲ್ಲಿ ಪ್ರಮುಖವಾಗಿ ಬಿಜಾಪುರ ಕಲಾ ಶಿಬಿರ- 2024, ಅಂತರಾಷ್ಟ್ರೀಯ ಕಲಾ ಶಿಬಿರ-ಮೂಡುಬಿದರೆ-2023, ಕಾರ್ಕಳ ಕಲಾ ಶಿಬಿರ-2022, ರಾಷ್ಟ್ರೀಯ ಕಲಾವಿದರ ಶಿಬಿರ, ವಾರಣಾಸಿ-2016, ಪಿ.ಆರ್.ತಿಪ್ಪೇಸ್ವಾಮಿ ಟ್ರಸ್ಟ್ 2014, ಕಾಗಿನೆಲೆ ಟ್ರಸ್ಟ್, ಕಾಗಿನೆಲೆ ಕಲಾಶಿಬಿರ, ಹಾವೇರಿ 2013, ಕನ್ನಡ ಸಾಹಿತ್ಯ ಸಮ್ಮೇಳನ ಬಿಜಾಪುರ 2013, ವಿಶ್ವ ಕನ್ನಡ ಸಮ್ಮೇಳನ ಕಲಾ ಶಿಬಿರ ಬೆಳಗಾವಿ-2011, ಕರ್ನಾಟಕ ಲಲಿತ ಕಲಾ ಅಕಾಡೆಮಿ ಕಲಾ ಶಿಕ್ಷಕರ ಶಿಬಿರ ಹಾಸನ-2010, ಕರ್ನಾಟಕ ಲಲಿತ ಕಲಾ ಅಕಾಡೆಮಿ ಕಲಾಶಿಬಿರ, ಕೆಮ್ಮಣ್ಣು ಗುಂಡಿ-2009, ವೆಂಕಟಪ್ಪ ಗ್ಯಾಲರಿ, ಬೆಂಗಳೂರು-2007, ಮಹಾಮಸ್ತಕಾಭಿಷೇಕ ಕಲಾವಿದರ ಶಿಬಿರ-2006, ಉಪಾಸನಾ ಕಲಾವಿದರ ಶಿಬಿರ ಸಮಸೆ ಚಿಕ್ಕಮಗಳೂರು-2006, ರಾಷ್ಟ್ರೀಯ ಕಲಾ ಪ್ರದರ್ಶನ, ಮೌಂಟ್ ಅಬು-2004, ಅಕಾಡೆಮಿ ಸದಸ್ಯರಿಗೆ ಕಲಾ ಶಿಬಿರ, ಹೊನ್ನಾವರ-2003 ರಾಷ್ಟ್ರೀಯ ಸಂಶೋಧನಾ ಕಾರ್ಯಾಗಾರ, ದೆಹಲಿ-2000, ಹೊಯ್ಸಳ ಉತ್ಸವ ಕಲಾ ಶಿಬಿರ, ಹಳೇಬೀಡು- 1999, ಕಲಾ ಬರಹಗಾರರ ಶಿಬಿರ, ಕರ್ನಾಟಕ ಲಲಿತಕಲಾ ಅಕಾಡೆಮಿ, ಇಳಕಲ್-1999, ಕಲಾ ಉಪನ್ಯಾಸಕರ ಚಿತ್ರಕಲಾ ಪ್ರದರ್ಶನ ಬಿಜಾಪುರ-1999, ಕರ್ನಾಟಕ ಲಲಿತಕಲಾ ಅಕಾಡೆಮಿಯಿಂದ ಕಲಾವಿದರ ಶಿಬಿರ ಅಲ್ಲದೇ ದೇಸಾಯಿಯವರು 60 ಮೇಲ್ಪಟ್ಟ ಗುಂಪು ಪ್ರದರ್ಶನದಲ್ಲಿ ಈವರೆಗೆ ಭಾಗಿಯಾಗಿದ್ದಾರೆ.

ಇವರ ಪೈಂಟಿಂಗ್ಸ್‌ಗಳ ಖಾಸಗಿ ಸಂಗ್ರಹಣೆಗಳು ಸಾಗರೋತ್ತರವಾಗಿ ಲಂಡನ್, ಬೆಲ್ಜಿಯಂ, ಫ್ರಾನ್ಸ್ , ಸ್ವಿಜಲ್ಯಾಂಡ್, ಜರ್ಮನಿ, ಆಸ್ಟ್ರಿಯಾ, ಯುಎಇ, ಮಸ್ಕತ್, ಕೆನಡಾಗಳಲ್ಲಿ ಅಲ್ಲದೇ ಭಾರತದಲ್ಲಿ ಮೌಂಟ್ ಅಬು, ಹೈದರಾಬಾದ್, ಬೆಂಗಳೂರು, ಚೆನ್ನೈ, ದೆಹಲಿ, ಗುಲ್ಬರ್ಗಾ, ಕೊಪ್ಪಳ, ಮೈಸೂರು, ಹಾಸನ, ಹೊನ್ನಾವರ, ಮಂಗಳೂರು, ಉಡುಪಿ, ಕುಂದಾಪುರ, ಮುಂಬೈ, ಚೆನ್ನೈ, ಪಾಂಡಿಚೇರಿ, ಕೊಚ್ಚಿಯಲ್ಲಿ ಇವೆ. ದೇಸಾಯಿಯವರು ಮಾಜಿ ಸದಸ್ಯರು ಕರ್ನಾಟಕ ಲಲಿತಕಲಾ ಅಕಾಡೆಮಿ, ಕರ್ನಾಟಕ ಬಾಲ ವಿಕಾಸ ಅಕಾಡೆಮಿಯ ಮಾಜಿ ಸದಸ್ಯರು ಧಾರವಾಡ, ಸಂಚಾಲಕರು ಮಹಾಮಸ್ತಕಾಭಿಷೇಕ ಕಲಾವಿದರ ಶಿಬಿರ 2006, ಸುವರ್ಣ ಕರ್ನಾಟಕ ಕಲಾವಿದರ ಶಿಬಿರ, ಹಾಸನ 2006, ಸಂಚಾಲಕರು ಚಿತ್ಕಲಾ ಉದಯೋನ್ಮುಖ ಕಲಾವಿದರ ಪ್ರದರ್ಶನ, ಕಾರ್ಯದರ್ಶಿ ರಾಜ್ಯ ಕಲಾಶಿಕ್ಷಕರ ಸಮ್ಮೇಳನ ಹಾಸನ2001,

ಕಲಾವಿದರನ್ನು ಕಲೆ ಹಾಕಿ ಯಶಸ್ವಿ ಕಲಾಶಿಬಿರ ಕಲಾ ಪ್ರದರ್ಶನಗಳನ್ನು ಏರ್ಪಡಿಸಿ ಕಲಾಸಕ್ತರ ಗಮನ ಸೆಳೆದಿರುವ ದೇಸಾಯಿಯವರು ಉತ್ತಮ ಛಾಯಾಗ್ರಾಹಕರೂ ಹೌದು. ಅವರು ತಮ್ಮ ಛಾಯಾಗ್ರಹಣದಿಂದ ಹಾಸನದ ಹುಣಸಿನಕೆರೆ ಫೋಟೋ ತೆಗೆದು ಸಾರ್ವಜನಿಕರ, ಪರಿಸರ ಪ್ರೇಮಿಗಳ ಮನಸೆಳೆದು ಕೆರೆ ಉಳಿವಿಗೆ ತಮ್ಮದೇ ಕಲ್ಪನೆಯಲ್ಲಿ ಕೆಲಸ



ಮಾಡಿದ್ದಾರೆ. ಮನಕ್ಕೆ ಮುದ ನೀಡುವ ಚಿಂತನೆಗೀಡು ಮಾಡುವ ಹಲವಾರು ಚಿತ್ರಗಳಿಗೆ ಕುಂಚದಿಂದ ಜನ್ಮ ನೀಡಿದ್ದಾರೆ. ನಿಸರ್ಗದ ಅನೇಕ ಚಿತ್ರಗಳನ್ನು ರಚಿಸಿರುವುದಲ್ಲದೇ ತಮ್ಮ ಕ್ಯಾಮರದಿಂದಲೂ ಪ್ರಕೃತಿಯ ರಮ್ಯ ದೃಶ್ಯಗಳನ್ನು ಸೆರೆ ಹಿಡಿದ್ದಾರೆ. ಪ್ರಕೃತಿಯ ವಿಶಿಷ್ಟ ಸೌಂದರ್ಯ ಕಲಾವಿದನನ್ನು ಪ್ರಭಾವಿಸುವಂತೆಯೆ ಅವನ ಭಾವನಾತ್ಮಕ ಪ್ರತಿಕ್ರಿಯೆಯು ಅವನ ಅಂತರಂಗ ಸಾಮರ್ಥ್ಯವನ್ನು ಮತ್ತು ವೈಯಕ್ತಿಕ ಅಭಿರುಚಿಯನ್ನು ಒಳಗೊಂಡಿರುತ್ತದೆ. ಈ ದಿಸೆಯಲ್ಲಿ ದೇಸಾಯಿರವರ ಪ್ರಕೃತಿ ಮತ್ತು ವಿಕೃತಿ ಎಂಬ ಕಲಾಕೃತಿ ಅಮೂರ್ತ ಶೈಲಿಯ ಕಲಾರಚನೆಯಾಗಿದ್ದು ಚಿಂತನೆಗೆ ಹಚ್ಚುವ ಮೂಲದ್ರವ್ಯವನ್ನು ಒದಗಿಸುತ್ತದೆ. ಮನುಷ್ಯ ಮತ್ತು ಪ್ರಕೃತಿ ನಡುವಿನ ಅವಿನಾಭಾವ ಸಂಬಂಧವನ್ನು ವಿಕೃತಗೊಳಿಸುತ್ತಿರುವ ಮನುಷ್ಯರ ಮನೋಭಾವನೆಯನ್ನು ಸಾಂಕೇತಿಕವಾಗಿ ಪ್ರತಿಬಿಂಬಿಸಿದೆ. ಪ್ರಕೃತಿಯನ್ನೇ ಅವಲಂಬಿಸಿ ಬದುಕುವ ಮನುಷ್ಯ ಭವಿಷ್ಯವನ್ನು ಯೋಚಿಸದೆ ನಿಸರ್ಗ ನಾಶ ಮಾಡುತ್ತಿರುವ ವಿಕೃತ ಮನೋಭಾವನೆಯನ್ನು ಅರ್ಥಗರ್ಭಿತವಾಗಿ ಮತ್ತು ಸಾಂಕೇತಿಕವಾಗಿ ಚಿತ್ರಿಸಲ್ಪಟ್ಟ ಕಲಾಕೃತಿಯಲ್ಲಿ ಪ್ರಸ್ತುತ ಜನ ನೈಸರ್ಗಿಕ ಸಂಪತ್ತನ್ನು ಹಾಳುಗೆಡುವುತ್ತಿರುವ ಬಗ್ಗೆ ಕಲಾವಿದರಲ್ಲಿ ಆಕ್ರೋಶ ಮತ್ತು ಸಮಾಜಿಕ ಕಳಕಳಿಯಿದೆ. ಚಿತ್ರಕಲೆಯ ವಿವಿಧ ಆಯಾಮಗಳಲ್ಲಿ ಕೃಷಿ ಮಾಡಿ ಜಲವರ್ಣ, ತೈಲವರ್ಣ, ಪೋಸ್ಟರ್ ಕಲರ್, ಟ್ರಾನ್ಸ್ಪರೆಂಟ್ ಬಣ್ಣ ಬಳಸಿ ಮನೋಹರವಾದ ಕಲಾಕೃತಿಗಳನ್ನು ರಚಿಸಿದ್ದಾರೆ. ಜಲವರ್ಣದ ಪಾರದರ್ಶಕ ಬಣ್ಣಗಳನ್ನು ಬಳಸಿ ಸೃಷ್ಟಿಸಿರುವ ಚಿತ್ರಗಳು ಹಾಗೂ ತೈಲವರ್ಣದ ಇವರ ಕಲಾಭಿವ್ಯಕ್ತಿಗೆ ಸಾಕ್ಷಿಯಾಗಿದೆ. ಉತ್ತಮ ಛಾಯಾಗ್ರಾಹಕರಾಗಿರುವ ದೇಸಾಯಿಯವರು ತಾವು ಭೇಟಿನೀಡಿದ್ದ ಜರ್ಮನಿ, ಹಾಲೆಂಡ್, ಬೆಲ್ಲಿಯಂ, ಪ್ಯಾರಿಸ್, ಸ್ವಿಜ್ಜರ್ ಲ್ಯಾಂಡ್, ನ್ಯೂಜಿಲ್ಯಾಂಡ್ ಆಸ್ಟ್ರೇಲಿಯ ದೇಶಗಳ ಅದ್ಭುತ ಛಾಯಾಚಿತ್ರಗಳನ್ನು ಸೆರೆಹಿಡಿದ್ದಾರೆ. ತಮ್ಮ ಮನೆಯನ್ನೇ ಕಲಾಗ್ಯಾಲರಿ ಮಾಡಿ ಬೇರೆ ಹೊರಗಿನ ಕಲಾವಿದರ ಕಲಾಪ್ರದರ್ಶನಗಳನ್ನು ಮಾಡಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248